**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

12.03.2026: 13.10 hrs

********

**ಮುಖ್ಯಾಂಶಗಳು :**

1. ಪ್ರಧಾನಿ ನರೇಂದ್ರ ಮೋದಿ ಅವರಿಂದ ನಾಳೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತು ಬಿಡುಗಡೆ
2. ಹರ್ಮೂಜ್ ಜಲಸಂಧಿಯ ಮೂಲಕ ಹಾದುಹೋಗಲು ಭಾರತದ ಟ್ಯಾಂಕರ್‌ಗಳಿಗೆ ಇರಾನ್ ಅವಕಾಶ
3. ಲೆಬನಾನ್, ಕತಾರ್‌ನಲ್ಲಿದ್ದ ಭಾರತೀಯರು ವಿಶೇಷ ವಿಮಾನಗಳಲ್ಲಿ ಸ್ವದೇಶಕ್ಕೆ ಆಗಮನ
4. ಜಮ್ಮು-ಕಾಶ್ಮೀರ ಮಾಜಿ ಮುಖ್ಯಮಂತ್ರಿ ಫಾರುಖ್ ಅಬ್ದುಲ್ಲಾ ಮೇಲಿನ ದಾಳಿ ಪ್ರಕರಣ ; ಸಮಗ್ರ ತನಿಖೆಯ ಭರವಸೆ ನೀಡಿದ ಕೇಂದ್ರ ಸರ್ಕಾರ

************

ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂನ ಗುವಾಹಟಿಯಲ್ಲಿ ನಾಳೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. ಈ ಕುರಿತು ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾಹಿತಿ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪ್ರಧಾನಿ ನರೇಂದ್ರ ಮೋದಿ ಅವರು ಸುಮಾರು ೯ ಕೋಟಿ ೩೨ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮೂಲಕ ೧೮ ಸಾವಿರದ ೬೪೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಿದ್ದಾರೆ ಎಂದು ತಿಳಿಸಿದರು. ಈ ಯೋಜನೆಯಡಿ ಇದುವರೆಗೆ ರೈತರಿಗೆ ೪ ಲಕ್ಷ ೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು ವರ್ಗಾಯಿಸಲಾಗಿದೆ. ಮುಂದಿನ ಕಂತಿನ ಬಿಡುಗಡೆಯೊಂದಿಗೆ ಒಟ್ಟು ಮೊತ್ತ ೪ ಲಕ್ಷ ೨೭ ಸಾವಿರ ಕೋಟಿ ರೂಪಾಯಿಗಳನ್ನು ಮೀರಲಿದೆ ಎಂದು ಅವರು ಮಾಹಿತಿ ನೀಡಿದರು.

************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯಲ್ಲಿ ಇಂದು ಕೃಷಿ-ಆಹಾರ ವ್ಯವಸ್ಥೆಯಲ್ಲಿ ಮಹಿಳೆಯರ ಪಾತ್ರ ಕುರಿತ ಜಾಗತಿಕ ಸಮ್ಮೇಳನ-೨೦೨೬ ಅನ್ನು ಉದ್ಘಾಟಿಸಿದರು. ರಾಷ್ಟ್ರ ರಾಜಧಾನಿಯಲ್ಲಿರುವ ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಸಮಾವೇಶ ಕೇಂದ್ರದಲ್ಲಿ ನಡೆಯುತ್ತಿರುವ ಮೂರು ದಿನಗಳ ಈ ಸಮ್ಮೇಳನದ ಉದ್ಘಾಟನಾ ಅಧಿವೇಶನ ಉದ್ದೇಶಿಸಿ, ರಾಷ್ಟ್ರಪತಿ ಮಾತನಾಡಿದರು.

ಧ್ವನಿ : ರಾಷ್ಟ್ರಪತಿ (೨೮ ಸೆಕೆಂಡ್‌ಗಳು)

ಈ ಸಂದರ್ಭದಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉಪಸ್ಥಿತರಿದ್ದಾರೆ. ಸಮ್ಮೇಳನದಲ್ಲಿ ವಿಜ್ಞಾನಿಗಳು, ನೀತಿ ನಿರೂಪಕರು, ಕೈಗಾರಿಕಾ ಉದ್ಯಮಿಗಳು, ವೃತ್ತಿಪರರು, ರೈತ ಮಹಿಳೆಯರು, ನವೋದ್ಯಮಗಳು ಮತ್ತು ವಿದ್ಯಾರ್ಥಿಗಳು ಸೇರಿದಂತೆ ೭೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದಾರೆ.

************

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಮತ್ತು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ನಡುವಿನ ಮಾತುಕತೆ ನಂತರ ಭಾರತದ ಧ್ವಜ ಹೊತ್ತ ಟ್ಯಾಂಕರ್‌ಗಳಿಗೆ ಹರ್ಮೂಜ್ ಜಲಸಂಧಿಯ ಮೂಲಕ ಹಾದುಹೋಗಲು ಇರಾನ್ ಅವಕಾಶ ನೀಡಿದೆ. ಆಯಕಟ್ಟಿನ ಹರ್ಮೂಜ್ ಜಲಸಂಧಿ ಮೂಲಕ ಹಾದುಹೋಗುವ ಜಲಮಾರ್ಗದಲ್ಲಿ ಅಮೆರಿಕ, ಯೂರೋಪ್ ಮತ್ತು ಇಸ್ರೇಲ್ ಹಡಗುಗಳಿಗೆ ನಿರ್ಬಂಧ ವಿಧಿಸಿರುವ ನಡುವೆಯೇ ಭಾರತೀಯ ಟ್ಯಾಂಕರ್‌ಗಳಾದ 'ಪುಷ್ಪಕ್' ಮತ್ತು 'ಪರಿಮಳ್' ಹರ್ಮೂಜ್ ಜಲಸಂಧಿಯ ಮೂಲಕ ಸುರಕ್ಷಿತವಾಗಿ ಹಾದುಹೋಗುತ್ತಿವೆ. ಕಳೆದ ಮಂಗಳವಾರ ಉಭಯ ನಾಯಕರು ಪಶ್ಚಿಮ ಏಷ್ಯಾದಲ್ಲಿ ಬದಲಾಗುತ್ತಿರುವ ಪರಿಸ್ಥಿತಿಯ ಬಗ್ಗೆ ಚರ್ಚಿಸಿದ್ದರು. ಅಲ್ಲದೇ ಹರ್ಮೂಜ್ ಜಲಸಂಧಿಯ ಮೂಲಕ ಭಾರತದ ಹಡಗುಗಳಿಗೆ ಅವಕಾಶ ನೀಡುವಂತೆ ಡಾ.ಎಸ್.ಜೈಶಂಕರ್ ಒತ್ತಾಯಿಸಿದ್ದರು. ಏಷ್ಯಾದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿರುವ ಭಾರತ, ಹರ್ಮೂಜ್ ಜಲಸಂಧಿಯ ಮೇಲೆ ಹೆಚ್ಚು ಅವಲಂಬಿತವಾಗಿದೆ. ಭಾರತಕ್ಕೆ ಆಮದಾಗುವ ಶೇಕಡ ೫೦ಕ್ಕೂ ಹೆಚ್ಚು ಪ್ರಮಾಣದ ಕಚ್ಚಾತೈಲ

ಮತ್ತು ನೈಸರ್ಗಿಕ ಅನಿಲ ಈ ಜಲಮಾರ್ಗದ ಮೂಲಕ ಹಾದುಹೋಗುತ್ತದೆ. ಪ್ರಸ್ತುತ ಈ ಜಲಮಾರ್ಗದಲ್ಲಿ ಭಾರತದ ಧ್ವಜವನ್ನು ಹೊತ್ತ ೨೮ ಹಡಗುಗಳು ಕಾರ್ಯನಿರ್ವಹಿಸುತ್ತಿವೆ.

************

ಪಶ್ಚಿಮ ಏಷ್ಯಾದ ಸಂಘರ್ಷದ ಪರಿಸ್ಥಿತಿ ಹಿನ್ನೆಲೆಯಲ್ಲಿ ಲೆಬನಾನ್ ಮತ್ತು ಕತಾರ್‌ನಲ್ಲಿದ್ದ ಭಾರತೀಯರನ್ನು ವಾಣಿಜ್ಯ ವಿಮಾನಗಳಲ್ಲಿ ಸ್ವದೇಶಕ್ಕೆ ಕರೆ ತರಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಬೈರುತ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಪ್ರಕಾರ, ಲೆಬನಾನ್‌ನಲ್ಲಿದ್ದ ೧೭೭ ಭಾರತೀಯ ಪ್ರಜೆಗಳ ಮೊದಲ ತಂಡವನ್ನು ನಿನ್ನೆ ಚಾರ್ಟರ್ ವಿಮಾನದ ಮೂಲಕ ನವದೆಹಲಿಗೆ ಕಳುಹಿಸಲಾಗಿದೆ. ಈ ತಂಡವನ್ನು ಬೈರುತ್-ರಫಿಕ್ ಹರಿರಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಲೆಬನಾನ್‌ನಲ್ಲಿರುವ ಭಾರತೀಯ ರಾಯಭಾರಿ ನೂರ್ ರೆಹಮಾನ್ ಶೇಖ್ ಬೀಳ್ಕೊಟ್ಟರು. ಇನ್ನೊಂದೆಡೆ, ಕತಾರ್‌ನಲ್ಲಿ ಸಿಲುಕಿಕೊಂಡಿದ್ದ ೫೦೦ಕ್ಕೂ ಹೆಚ್ಚು ಭಾರತೀಯರು ಕತಾರ್ ಏರ್‌ವೇಸ್ ವಿಮಾನಗಳಲ್ಲಿ ನವದೆಹಲಿ ಮತ್ತು ಮುಂಬೈ ತಲುಪಿದ್ದಾರೆ ಎಂದು ಕತಾರ್‌ನಲ್ಲಿರುವ ಭಾರತೀಯ ರಾಯಭಾರಿ ಕಚೇರಿ ತಿಳಿಸಿದೆ.

************

ಗ್ರಾಹಕರಿಗೆ ದೇಶೀಯ ಪೂರೈಕೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಹಲವಾರು ಸರ್ಕಾರಿ ಕ್ರಮಗಳ ನಂತರ ಭಾರತದ ಎಲ್‌ಪಿಜಿ ಉತ್ಪಾದನೆಯು ಶೇಕಡಾ ೨೫ ರಷ್ಟು ಹೆಚ್ಚಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ೨೦೨೬ರ ಮಾರ್ಚ್ ೮ ರಂದು ಕೇಂದ್ರ ಸರ್ಕಾರ, ಪ್ರೊಪೇನ್, ಬ್ಯುಟೇನ್, ಪ್ರೊಪೈಲೀನ್ ಮತ್ತು ಬ್ಯುಟೇನ್‌ಗಳ ಹರಿವನ್ನು ಎಲ್‌ಪಿಜಿ ಕಡೆಗೆ ತಿರುಗಿಸುವ ಮೂಲಕ ಎಲ್‌ಪಿಜಿ ಉತ್ಪಾದನೆಯನ್ನು ಗರಿಷ್ಠಗೊಳಿಸಲು ಸಂಸ್ಕರಣಾಗಾರಗಳು ಮತ್ತು ಪೆಟ್ರೋಕೆಮಿಕಲ್ ಕಂಪನಿಗಳಿಗೆ ನಿರ್ದೇಶನ ನೀಡುವ ಆದೇಶ ಹೊರಡಿಸಿತು. ಈ ಕ್ರಮಗಳ ಪರಿಣಾಮವಾಗಿ, ದೇಶೀಯ ಎಲ್‌ಪಿಜಿ ಉತ್ಪಾದನೆಯು ಶೇಖಡ ೨೫ರಷ್ಟು ಹೆಚ್ಚಾಗಿದೆ ಎಂದು ಹೇಳಿದರು. ಭಾರತದ ಕಚ್ಚಾ ತೈಲ ಪೂರೈಕೆಗಳು ಸುರಕ್ಷಿತವಾಗಿವೆ ಮತ್ತು ಸುಮಾರು ಶೇಖಡ ೭೦ರಷ್ಟು ಕಚ್ಚಾ ತೈಲ ಆಮದುಗಳು

ಈಗ ಹರ್ಮುಜ್ ಜಲಸಂಧಿಯ ಹೊರಗಿನಿಂದ ಬರುತ್ತಿವೆ ಎಂದು ತಿಳಿಸಿದರು. ೪೦ ದೇಶಗಳಿಂದ ಕಚ್ಚಾ ತೈಲವನ್ನು ಭಾರತ ಆಮದು ಮಾಡಿಕೊಳ್ಳುತ್ತಿದೆ. ತೈಲ ಮಾರುಕಟ್ಟೆ ಕಂಪನಿಗಳು ವಿವಿಧ ಮೂಲಗಳ ಮೂಲಕ ಕಚ್ಚಾ ಸರಕುಗಳನ್ನು ಪಡೆದುಕೊಂಡಿವೆ. ದೇಶದ ಅನಿಲ ಕಂಪನಿಗಳು ಹೊಸ ಮೂಲಗಳಿಂದ ಎಲ್‌ಎನ್‌ಜಿ ಸರಕುಗಳನ್ನು ಖರೀದಿಸಿವೆ ಎಂದು ಸುಜಾತಾ ಶರ್ಮಾ ಮಾಹಿತಿ ನೀಡಿದರು.

************

ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಫಾರುಖ್ ಅಬ್ದುಲ್ಲಾ ಅವರ ಮೇಲಿನ ದಾಳಿಯ ಹಿಂದಿನ ಕಾರಣಗಳನ್ನು ಬಹಿರಂಗಪಡಿಸಲು ಸಮಗ್ರ ತನಿಖೆ ನಡೆಸಲಾಗುವುದು ಎಂದು ರಾಜ್ಯಸಭೆಯ ಸದನದ ನಾಯಕ ಜೆ.ಪಿ.ನಡ್ಡಾ ಭರವಸೆ ನೀಡಿದ್ದಾರೆ. ರಾಜ್ಯಸಭೆಯಲ್ಲಿಂದು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಅವರು ಪ್ರಸ್ತಾಪಿಸಿದ ವಿಷಯಕ್ಕೆ ಪ್ರತಿಕ್ರಿಯಿಸಿದ ಜೆ.ಪಿ.ನಡ್ಡಾ, ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದೆ. ಘಟನೆ ಕುರಿತು ವಿವರವಾದ ತನಿಖೆ ನಡೆಸಲಾಗುವುದು ಎಂದು ತಿಳಿಸಿದರು. ರಾಜಕೀಯ ನಾಯಕರು ಸೇರಿದಂತೆ ಪ್ರತಿಯೊಬ್ಬ ನಾಯಕರ ಜೀವನ ಮತ್ತು ಭದ್ರತೆಯನ್ನು ರಕ್ಷಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು.

************

ಐತಿಹಾಸಿಕ ದಂಡಿ ಯಾತ್ರೆಯಲ್ಲಿ ಭಾಗವಹಿಸಿದ್ದ ಮಹಾತ್ಮ ಗಾಂಧೀಜಿ ಸೇರಿದಂತೆ ಎಲ್ಲಾ ವೀರ ಸ್ವಾತಂತ್ರ್ಯ ಹೋರಾಟಗಾರರಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಗೌರವ ನಮನ ಸಲ್ಲಿಸಿದ್ದಾರೆ. ೧೯೩೦ರಲ್ಲಿ ಮಹಾತ್ಮ ಗಾಂಧೀಜಿಯವರ ನೇತೃತ್ವದಲ್ಲಿ ಆರಂಭವಾದ ದಂಡಿ ಸತ್ಯಾಗ್ರಹವು, ಭಾರತದ ಸ್ವಾತಂತ್ರ್ಯ ಚಳವಳಿಯ ಇತಿಹಾಸದಲ್ಲಿ ಒಂದು ನಿರ್ಣಾಯಕ ಘಟ್ಟವಾಗಿದೆ.ಸತ್ಯ ಮತ್ತು ಅಹಿಂಸೆಯ ಆದರ್ಶಗಳ ಮೂಲಕ ಈ ಆಂದೋಲನ ರಾಷ್ಟ್ರವ್ಯಾಪಿ ಸ್ವಾವಲಂಬನೆಯ ಮನೋಭಾವ ಪ್ರೇರೇಪಿಸಿತು ಎಂದು ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ದೇಶ ಇಂದು ಆತ್ಮನಿರ್ಭರ ಭಾರತದತ್ತ ಹಾಗೂ ವಿಕಸಿತ ಭಾರತದ ದೃಷ್ಟಿಕೋನದತ್ತ ಶ್ರಮಿಸುತ್ತಿರುವಾಗ ದಂಡಿ ಸತ್ಯಾಗ್ರಹದಿಂದ

ಪ್ರೇರಿತವಾದ ಸ್ವಾವಲಂಬನೆಯ ಮನೋಭಾವವು ರಾಷ್ಟ್ರದ ಪ್ರಯಾಣಕ್ಕೆ ಮಾರ್ಗದರ್ಶನ ನೀಡುತ್ತಲೆ ಇದೆ ಎಂದು ಅವರು ತಿಳಿಸಿದ್ದಾರೆ.

************

ಜಮ್ಮು-ಕಾಶ್ಮೀರದ ರಜೌರಿ ಜಿಲ್ಲೆಯ ಗಡಿ ನಿಯಂತ್ರಣಾ ರೇಖೆಯಲ್ಲಿ ಒಳನುಸುಳಲು ವಿಫಲ ಯತ್ನ ನಡೆಸಿದ ಸಂದರ್ಭದಲ್ಲಿ ಹತನಾದ ಭಯೋತ್ಪಾದಕನನ್ನು ಪಾಕಿಸ್ತಾನ ಮೂಲದ ಲಷ್ಕರೆ ತೈಬಾ ಸಂಘಟನೆಯ ಉಗ್ರ ಎಂದು ಗುರುತಿಸಲಾಗಿದೆ. ರಜೌರಿ ಜಿಲ್ಲೆಯ ನೌಶೆರಾ ಸೆಕ್ಟರ್‌ನಲ್ಲಿರುವ ಝುಂಗಾರ್ ಪ್ರದೇಶದಲ್ಲಿ ಮತ್ತೊಬ್ಬ ಸಹಚರನೊಂದಿಗೆ ಭಾರತದ ಗಡಿ ನುಸುಳಲು ಪ್ರಯತ್ನಿಸುತ್ತಿದ್ದ ಈತನನ್ನು ಮಂಗಳವಾರ ಮಧ್ಯಾಹ್ನ ೩ ಗಂಟೆ ಸುಮಾರಿಗೆ ಭದ್ರತಾ ಪಡೆಗಳು ಹೊಡೆದುರುಳಿಸಿದ್ದರು. ದಾಖಲೆಗಳು ಮತ್ತು ಗುಪ್ತಚರ ಮಾಹಿತಿಯ ಆಧಾರದ ಮೇಲೆ ಮೃತ ಉಗ್ರನನ್ನು ಪಾಕಿಸ್ತಾನ ಆಕ್ರಮಿತ ಜಮ್ಮು-ಕಾಶ್ಮೀರ ನಿವಾಸಿ ಹಮ್ಜಾ ಯೂಸುಫ್ ಎಂದು ಗುರುತಿಸಲಾಗಿದೆ ಎಂದು ಭಾರತೀಯ ಸೇನೆ ತಿಳಿಸಿದೆ.

************

೨೦೨೬ರ ಎಫ್‌ಐಎಚ್ ಹಾಕಿ ಮಹಿಳಾ ವಿಶ್ವಕಪ್ ಪಂದ್ಯಾವಳಿಯ ಸೆಮಿಫೈನಲ್‌ನಲ್ಲಿ ನಾಳೆ ಭಾರತ, ಇಟಲಿ ತಂಡವನ್ನು ಎದುರಿಸಲಿದೆ. ಹೈದರಾಬಾದ್‌ನಲ್ಲಿ ನಿನ್ನೆ ಸಂಜೆ ನಡೆದ ಬಿ ಗುಂಪಿನ ಅರ್ಹತಾ ಪಂದ್ಯದಲ್ಲಿ ಭಾರತ ತಂಡ, ವೇಲ್ಸ್ ವಿರುದ್ಧ ೪-೧ ಗೋಲುಗಳಿಂದ ಭರ್ಜರಿ ಜಯ ಸಾಧಿಸಿತು. ನವನೀತ್ ಕೌರ್ ಮೂರು ಗೋಲುಗಳನ್ನು ಗಳಿಸಿದರೆ, ಸಾಕ್ಷಿ ರಾಣಾ ಒಂದು ಗೋಲು ಗಳಿಸಿದರು. ಈ ಗೆಲುವಿನೊಂದಿಗೆ, ಭಾರತ ತಂಡ, ಸೆಮಿಫೈನಲ್ ಸ್ಥಾನ ಖಚಿತಪಡಿಸಿಕೊಂಡಿತ್ತು.